# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಆಸಿಡ್ ದಾಳಿಗೊಳಗಾದ ಮಹಿಳೆ/ ಹೆಣ್ಣುಮಕ್ಕಳಿಗೆ ನೀಡಲಾಗುತ್ತಿರುವ ಮಾಸಾಶನವನ್ನು ಹೆಚ್ಚಿಸುವ ಬಗ್ಗೆ.

ಓದಲಾಗಿದೆ: ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 149 ಡಿಎಸ್‌ಪಿ 2015, ದಿನಾಂಕ:19.09.2015.

ಪ್ರಸ್ತಾವನೆ:

ಸರ್ಕಾರವು ಅಸಹಾಯಕ ವೃದ್ಧರಿಗೆ / ನಿರ್ಗತಿಕ ವಿಧವೆಯರಿಗೆ ಮತ್ತು ಅಂಗವಿಕಲರಿಗೆ, ಅವಿವಾಹಿತ / ವಿಚ್ಛೇದಿತ ಮಹಿಳೆಯರಿಗೆ /ಅಂಗತ್ವ ಅಲ್ಪಸಂಖ್ಯಾತರಿಗೆ ಹಾಗೂ ಆಸಿಡ್ ದಾಳಿಗೊಳಗಾದ ಮಹಿಳೆಯರಿಗೆ ಸಾಮಾಜಿಕ ಭದ್ರತೆ ಒದಗಿಸಿ ಸಮಾಜದ ಮುಖ್ಯವಾಹಿನಿಗೆ ತರುವನಿಟ್ಟಿನಲ್ಲಿ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿ ಮಾಸಾಶನವನ್ನು ಅರ್ಹ ಫಲಾನುಭವಿಗಳಿಗೆ ನೀಡುತ್ತಿರುತ್ತದೆ.

ಮೇಲೆ ಓದಲಾದ ಸರ್ಕಾರಿ ಆದೇಶದನ್ವಯ ಆಸಿಡ್ ದಾಳಿಗೊಳಗಾದ ಮಹಿಳೆ/ಹೆಣ್ಣುಮಕ್ಕಳಿಗೆ ರೂ. 3000/- ಮಾಶಾಸನ ನೀಡಲಾಗುತ್ತಿದೆ.

2022-23ನೇ ಸಾಲಿನ ಆಯವ್ಯಯದ ಕಂಡಿಕೆ 356 ರಡಿ ಆಸಿಡ್ ದಾಳಿಗೊಳಗಾದ ಸಂತ್ರಸ್ಥ ಮಹಿಳೆಯರಿಗೆ ಮಾಸಿಕ ಪಿಂಚಣಿಯನ್ನು ರೂ.10000/- ಗಳಿಗೆ ಹೆಚ್ಚಿಸಲಾಗುವುದು ಎಂದು ಘೋಷಿಸಲಾಗಿದೆ, ಈ ಹಿನ್ನಲೆಯಲ್ಲಿ ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಡಿಎಸ್‌ಎಸ್‌ಪಿ/ಒಎಪಿ/7/2022; ಬೆಂಗಳೂರು,
## ದಿನಾಂಕ: 11ನೇ ಏಪ್ರಿಲ್ 2022

ಪ್ರಸ್ತಾವನೆಯಲ್ಲಿ ವಿವರಿಸಿದಂತೆ 2022-23ನೇ ಸಾಲಿನ ಆಯವ್ಯಯದ ಕಂಡಿಕೆ 356 ರಡಿ ಆಸಿಡ್ ದಾಳಿಗೊಳಗಾದ ಸಂತ್ರಸ್ಥ ಮಹಿಳೆಯರಿಗೆ ಮಾಸಿಕ ಪಿಂಚಣಿಯನ್ನು ರೂ.10000/- ಗಳಿಗೆ ಹೆಚ್ಚಿಸಲಾಗುವುದು ಎಂದು ಘೋಷಿಸಿರುವಂತೆ ಆಸಿಡ್ ಸಂತ್ರಸ್ಥ ಮಹಿಳೆಯರಿಗೆ ಪ್ರಸ್ತುತ ನೀಡಲಾಗುತ್ತಿರುವ ರೂ.3000/- ಮಾಸಿಕ ಪಿಂಚಣಿ ಮೊತ್ತವನ್ನು ರೂ.10000/- ಗಳಿಗೆ ಹೆಚ್ಚಿಸಿ, ದಿನಾಂಕ: 01/04/2022 ರಿಂದ ಜಾರಿಗೆ ಬರುವಂತೆ ಆದೇಶಿಸಿದೆ.

ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿ ಈಗಾಗಲೇ ಮಾಸಾಶನ ಪಡೆಯುತ್ತಿರುವ ಫಲಾನುಭವಿಗಳಿಗೆ ಈ ಆದೇಶದಲ್ಲಿ ಹೆಚ್ಚಿಸಿರುವ ಮಾಸಾಶನ ಮೊತ್ತವನ್ನು ವಿತರಿಸಲು ಆಯುಕ್ತರು, ಖಜಾನೆ ಆಯುಕ್ತಾಲಯ ಹಾಗೂ ಜಿಲ್ಲಾ ಖಜಾನಾಧಿಕಾರಿಗಳು/ಉಪಖಜಾನಾಧಿಕಾರಿಗಳು ಇವರಿಗೆ ಅಧಿಕಾರ ಪ್ರತ್ಯಾಯೋಜಿಸಿ ಆದೇಶಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 149 ಡಿಎಸ್‌ಪಿ 2015, ದಿನಾಂಕ:19.09.2015 ರ ಆದೇಶದಲ್ಲಿ ವಿಧಿಸಿರುವ ಷರತ್ತು ಮತ್ತು ನಿಬಂಧನೆಗಳು ಅನ್ವಯವಾಗುತ್ತದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 343 ವೆಚ್ಚ-7/2022; ದಿನಾಂಕ: 07.04.2022 ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿಎಸ್ 36 ಪಿಎಫ್‌ಒ 2022; ದಿನಾಂಕ:06.04.2022 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯ ಪಾಲರಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

11/04/22
(ಜಯಲಕ್ಷ್ಮಿ)
ಸರ್ಕಾರದ ಉಪ ಕಾರ್ಯದರ್ಶಿ
ಕಂದಾಯ ಇಲಾಖೆ
(ಸೇವೆಗಳು-3, ಕೆ.ಎ.ಟಿ & ಬಾಣಿ ಮತ್ತು
ಭೂ.ಸು.ಕೋ ಮತ್ತು ಸಾ ಭ& ಪಿಂಚಣಿ)

ಇವರಿಗೆ: ಸಂಕಲನಕಾರರು, ಕರ್ನಾಟಕ ರಾಜ್ಯ, ವಿಕಾಸಸೌಧ, ಬೆಂಗಳೂರು ಇವರಿಗೆ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ , ಪ್ರಕಟಿಸಿ ಪ್ರಕಟಿತ 100 ಪ್ರತಿಗಳನ್ನು ನಿರ್ದೇಶಕರು, ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯ, ಕಂದಾಯ ಭವನ, ಬೆಂಗಳೂರು, ಇವರಿಗೆ ಒದಗಿಸಬೇಕೆಂದು

ಪ್ರತಿ:

1. ಮಹಾಲೇಖಪಾಲರ (ಲೆಕ್ಕಪತ್ರ ಮತ್ತು ಲೆಕ್ಕ ತಪಾಸಣೆ), (ಎ ಮತ್ತು ಇ) ಕರ್ನಾಟಕ, ಆಡಿಟ್ ಭವನ ಅಂಚೆ ಪೆಟ್ಟಿಗೆ ಸಂಖ್ಯೆ:5329/5369, ಪಾರ್ಕ್ ಹೌಸ್ ರೋಡ್, ಬೆಂಗಳೂರು-560001.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ವಿಧಾನಸೌಧ, ಬೆಂಗಳೂರು.

.....2

3.ಮಾನ್ಯ ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.

4.ಸರ್ಕಾರದ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಬೆಂಗಳೂರು.

5 ಸರ್ಕಾರದ ಕಾರ್ಯದರ್ಶಿಗಳು, (ಆಯವ್ಯಯ ಮತ್ತು ಸಂಪನ್ಮೂಲ), ವಿಧಾನ ಸೌಧ, ಬೆಂಗಳೂರು.

6 ಆಯುಕ್ತರು, ಖಜಾನೆ ಆಯುಕ್ತಾಲಯ, 6ನೇ ಮಹಡಿ ಕೆಪಿಸಿಎಲ್ ಗ್ರೀನ್ ಕಟ್ಟಡ, ಅರಮನೆ ರಸ್ತೆ. ಬೆಂಗಳೂರು.

7. ಪ್ರಾದೇಶಿಕ ಆಯುಕ್ತರು,ಬೆಂಗಳೂರು/ಮೈಸೂರು/ಬೆಳಗಾವಿ /ಕಲಬುರಗಿ ವಿಭಾಗ.

8. ಎಲ್ಲಾ ಜಿಲ್ಲಾಧಿಕಾರಿಗಳು.

9 ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಜಂಟಿ ಕಾರ್ಯದರ್ಶಿ,(ಸಚಿವ ಸಂಪುಟ ಶಾಖೆ) ವಿಧಾನಸೌಧ,ಬೆಂಗಳೂರು.

10. ಉಪ ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.

11. ಸರ್ಕಾರದಅಧೀನ ಕಾರ್ಯದರ್ಶಿಗಳು ಆರ್ಥಿಕ ಇಲಾಖೆ (ವೆಚ್ಚ-7) ವಿಧಾನ ಸೌಧ ಬೆಂಗಳೂರು.

12.ಎಲ್ಲಾ ಉಪವಿಭಾಗಾಧಿಕಾರಿಗಳು /ತಹಶೀಲ್ದಾರ್‌ಗಳು( ಸಂಬಂಧಪಟ್ಟ ಜಿಲ್ಲಾಧಿಕಾರಿಗಳ ಮುಖಾಂತರ).

13. ಎಲ್ಲಾ ಜಿಲ್ಲಾ ಖಜಾನೆ ಹಾಗೂ ಉಪ ಖಜಾನೆ ಅಧಿಕಾರಿಗಳು.

14. ಹೆಚ್ಚುವರಿ ಪ್ರತಿ ಮತ್ತು ರಕ್ಷಾಕಡತ